# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## *ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ ವಾರ್ಡಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ವ್ಯಾಪ್ತಿಯಲ್ಲಿರುವ ಹಚ್ಚಿನ್ಸ್ ಪಾರ್ಕ್‌ನಲ್ಲಿ ದಿನಾಂಕ: 16-06-2021 ರಂದು ನಡೆದ ವಾರ್ಡ್ ಡೆಟರ್ ಕಮಿಟಿ ಸಭೆಯ ನಡವಳಿಗಳು*

**ಹಾಜರಿದ್ದ ಸದಸ್ಯರು,**

1. ಶ್ರೀ ನಾರಾಯಣಸ್ವಾಮಿ ಅಧ್ಯಕ್ಷರು ಹಾಗೂ ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಕೆ ಶ್ರೀಕಾಂತ್, ಸದಸ್ಯ ಕಾರ್ಯದರ್ಶಿಗಳು ಮತ್ತು ಸಂಚಾಲಕರು,

**ಹಾಜರಿದ್ದ ಅಧಿಕಾರಿಗಳು**

1. ಶ್ರೀ ನಾಗೇಂದ್ರ ಪ್ರಸಾದ್, ಕಂದಾಯ ವಸೂಲಿಗಾರರು,
2. ಶ್ರೀ ಜಿ.ವಿ ನಾಗರಾಜ್, ಅಸೆಸ್ಸರ್, ಮಾರುತಿಸೇವಾನಗರ,
3. ಶ್ರೀ ಮಣಿಶಂಕರ್, ಹಿರಿಯ ಆರೋಗ್ಯ ನಿರೀಕ್ಷಕರು
4. ಶ್ರೀ ನವೀನ್, ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ
5. ಶ್ರೀ ಸಿ.ಎಂ. ವೆಂಕಟೇಶ್, ತೋಟಗಾರಿಕಾ ಇಲಾಖೆ
6. ಸ್ವಯಂ ಸೇವಕರು,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಹಾಗೂ ಸ್ವಯಂ ಸೇವಕರನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

1) ಮಾನ್ಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳು ಮಾತನಾಡಿ, ಮಾರುತಿಸೇವಾನಗರ ವಾರ್ಡ್ ವ್ಯಾಪ್ತಿಯಲ್ಲಿ **Ward Decentralized Triage and Emergency Response (DETER) Committee for COVID 19 Management (WDC)** ರಚಿಸಲಾಗಿದ್ದು, ಸಭೆಯಲ್ಲಿ ಹಾಜರಿದ್ದ ಸ್ವಯಂ ಸೇವಕರು ವಾರ್ಡ್ ವ್ಯಾಪ್ತಿಯಲ್ಲಿ ಮನೆ ಮನೆಗಳಿಗೆ ತೆರಳಿ, ಸಾರ್ವಜನಿಕರು ಕಡ್ಡಾಯವಾಗಿ ಲಸಿಕೆಯನ್ನು ಹಾಕಿಸಿಕೊಳ್ಳಲು, ಮಾಸ್ಕ್ ಧರಿಸುವುದು ಹಾಗೂ ಸಾಮಾಜಿಕ ಅಂತರ ಕಾಯ್ದುಕೊಳ್ಳಲು ಜಾಗೃತಿ ಮೂಡಿಸಲು ಸಭೆಗೆ ತಿಳಿಸಿದರು.

2) ಪ್ರಸ್ತುತ ಕೋವಿಡ್ ಸೋಂಕು ಯತೇಚ್ಛವಾಗಿ ಹರಡುತ್ತಿದ್ದು, ವಾರ್ಡ್ ವ್ಯಾಪ್ತಿಯ ಸೇವಾನಗರ ಹಾಗೂ ಜೈ ಭಾರತ್ ನಗರ ವಾಪ್ತಿಯಲ್ಲಿ ಸಾರ್ವಜನಿಕರು ಮಾಸ್ಕ್ ಧರಿಸದೇ ಇರುವುದರಿಂದ ಸೋಂಕು ಹೆಚ್ಚಾಗುವ ಸಾಧ್ಯತೆ ಇರುವುದರಿಂದ ಸದರಿ ಸ್ಥಳಗಳಲ್ಲಿ ಸಾರ್ವಜನಿಕರು ಕಡ್ಡಾಯವಾಗಿ ಮಾಸ್ಕ್ ಧರಿಸುವುದು, ಸಾಮಾಜಿಕ ಅಂತರ ಕಾಯ್ದುಕೊಳ್ಳುವುದು ಹಾಗೂ ಅನಾವಶ್ಯಕವಾಗಿ ಹೊರಗಡೆ ತಿರುಗಾಡದೇ ಇರುವಂತೆ ಸಾರ್ವಜನಿಕರಿಗೆ ಅರಿವು ಮೂಡಿಸಲು ಸ್ವಯಂ ಸೇವಕರಿಗೆ ಅರಿವು ಮೂಡಿಸಲು ಸಭೆಗೆ ತಿಳಿಸಿದರು.

3) ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ಬದಿ ವ್ಯಾಪಾರಿಗಳು ಹಾಗೂ ಎಂ.ಆರ್.ಪಿ ಅಂಗಡಿಯವರು ವ್ಯಾಪಾರ ವಹಿವಾಟು ನಡೆಸುವ ಸಂದರ್ಭದಲ್ಲಿ ಕಡ್ಡಾಯವಾಗಿ ಮಾಸ್ಕ್ ಧರಿಸಲು ಹಾಗೂ ಸದರಿಯವರು ಕಡ್ಡಾಯವಾಗಿ ಲಸಿಕೆ ಹಾಕಿಸಿಕೊಂಡು ವ್ಯಾಪಾರ ವಹಿವಾಟು ನಡೆಸಲು ಸ್ವಯಂ ಸೇವಕರು ಅರಿವು ಮೂಢಿಸಲು ಸಭೆಯಲ್ಲಿ ಹಾಜರಿದ್ದ, ಸ್ವಯಂ ಸೇವಕರಿಗೆ ಸೂಚಿಸಿದರು.

4) ವಾರ್ಡ್ ವ್ಯಾಪ್ತಿಯಲ್ಲಿರುವ ಜೂಡ್ ಶಾಲೆ ಹತ್ತಿರ, ಪಾರ್ಕ್ ಕಾರ್ನರ್‌ನಲ್ಲಿ ಸುತ್ತಮುತ್ತಲಿನ ಸಾರ್ವಜನಿಕರು ಕಸವನ್ನು ಹಾಕಿ ಬ್ಲಾಕ್ ನಿರ್ಮಾಣವಾಗಿದ್ದು, ಇದರಿಂದ ಸದರಿ ಪ್ರದೇಶದಲ್ಲಿ ವಾಸಿಸುತ್ತಿರುವ ಸಾರ್ವಜನಿಕರಿಗೆ ವಾಸನೆ ಹಾಗೂ ಆರೋಗ್ಯದ ಮೇಲೆ ದುಷ್ಪರಿಣಾಮವಾಗಿರುವುದಾಗಿ ಸಭೆಯಲ್ಲಿ ಪ್ರಸ್ತಾಪಿಸಲಾಗಿ, ಮಾನ್ಯ ಅಧ್ಯಕ್ಷರು ಮಾತನಾಡಿ ಸದರಿ ಪ್ರದೇಶದಲ್ಲಿ ಬ್ಲಾಕ್ ಸ್ಪಾಟ್‌ನ್ನು ತೆರವುಗೊಳಿಸಲು ಕೂಡಲೇ ಕ್ರಮವಹಿಸಲು ಘನ ತ್ಯಾಜ್ಯ ನಿರ್ವಹಣೆ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು.

5) ಮಾರುತಿಸೇವಾನಗರ ಜೀವನಹಳ್ಳಿ ಹಾಗೂ ಸತ್ಯಾನಗರ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಎಲ್ಲಂದರಲ್ಲಿ ಬಿದ್ದಿರುವ ಕಸ ಹಾಗೂ ಇತರೆ ತ್ಯಾಜ್ಯವನ್ನು ಸಮರ್ಪಕವಾಗಿ ತೆರವುಗೊಳಿಸದೇ ಇರುವ ಪಾಲಿಕೆಯ ಪೌರಕಾರ್ಮಿಕರನ್ನು ಬೇರೆ ಸ್ಥಳಗಳಿಗೆ ನಿಯೋಜಿಸಿ, ಬೇರೆ ಸ್ಥಳಗಳಲ್ಲಿ ನಿಯೋಜಿಸಿರುವ ಪೌರಕಾರ್ಮಿಕರನ್ನು ನಿಯೋಜಿಸಿ, ಕೆಲಸ ಕಾರ್ಯವನ್ನು ನಿರ್ವಹಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ಸದರಿ ಪ್ರದೇಶದಲ್ಲಿ ಬಿದ್ದಿರುವ ಕಸ ಹಾಗೂ ಇತರೆ ತ್ಯಾಜ್ಯವನ್ನು ತೆರವುಗೊಳಿಸಲು ಕ್ರಮವಹಿಸಲು ಘನ ತ್ಯಾಜ್ಯ ನಿರ್ವಹಣೆ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು.

6) ವಾರ್ಡ್ ವ್ಯಾಪ್ತಿಯ ಸೇವಾನಗರ ಬ್ರಿಡ್ಜ್ ಕೆಳಗಡೆ ಚಿಕನ್ ತ್ಯಾಜ್ಯವನ್ನು ರಾತ್ರಿ ಸಮಯದಲ್ಲಿ ಎಸೆಯುತ್ತಿದ್ದು, ಇದರಿಂದ ಸುತ್ತಮುತ್ತಲಿನ ಪ್ರದೇಶದಲ್ಲಿ ವಾಸಿಸುತ್ತಿರುವ ನಾಗರೀಕರಿಗೆ ವಾಸನೆ ಹಾಗೂ ಬೀದಿ ನಾಯಿಗಳಿಂದ ಸದರಿ ಪ್ರದೇಶದಲ್ಲಿ ಓಡಾಡುವ ನಾಗರೀಕರಿಗೆ ತೊಂದರೆಯಾಗುತ್ತಿದ್ದು, ಚಿಕನ್ ತ್ಯಾಜ್ಯವನ್ನು ಎಸೆಯುತ್ತಿರುವವರನ್ನು ಗುರುತಿಸಿ, ಸದರಿಯವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಚಿಕನ್ ತ್ಯಾಜ್ಯವನ್ನು ಎಸೆಯುತ್ತಿರುವವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲು ಕ್ರಮ ವಹಿಸಲು ಸಭೆಯಲ್ಲಿ ಹಾಜರಿದ್ದ ಆರೋಗ್ಯ ನಿರೀಕ್ಷಕರು ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ ರವರಿಗೆ ತಿಳಿಸಿದರು.

7) ವಾರ್ಡ್ ವ್ಯಾಪ್ತಿಯ ಲಾಜರ್ ರಸ್ತೆ ಹಾಗೂ ಕೃಷ್ಣಪ್ಪ ಗಾರ್ಡನ್‌ನಲ್ಲಿ ಡೆಬ್ರೀಸ್ ಹಾಗೂ ಕಟ್ಟಡದ ತ್ಯಾಜ್ಯವನ್ನು ಎಸೆಯುತ್ತಿದ್ದು, ಇದನ್ನು ಸದರಿ ಸ್ಥಳದಿಂದ ಕೂಡಲೇ ತೆರವುಗೊಳಿಸಲು ಕ್ರಮ ವಹಿಸಲು ಹಾಗೂ ಮಾರುತಿಸೇವಾನಗರ ವಾರ್ಡ್ ವ್ಯಾಪ್ತಿಯಲ್ಲಿ ಕೆಲವು ಪ್ರದೇಶಗಳಲ್ಲಿ ಬಿಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯವರು ರಸ್ತೆಗಳನ್ನು ಕತ್ತರಿಸಿ, ಅದನ್ನು ಸರಿಯಾಗಿ ಪುನರ್ ನಿರ್ಮಾಣ ಮಾಡದೇ ಇರುವುದರಿಂದ ಸದರಿ ಪ್ರದೇಶದಲ್ಲಿ ಸಂಚರಿಸುವ ವಾಹನ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದಾಗಿ, ಸಭೆಯಲ್ಲಿ

ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಕೂಡಲೇ ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಕಾಮಗಾರಿ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ವಿಷಯಗಳ ಬಗ್ಗೆ ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

**ಪ್ರತಿಯನ್ನು**

1) ವಲಯ ವಿಶೇಷ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
5) ವಾರ್ಡ್ ಕಮಿಟಿಯ ಸದಸ್ಯರಿಗೆ/ಕಛೇರಿ ಕಡತಕ್ಕೆ.